# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:934

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 24.02.2023

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬಿ.ಎಂ.ಟಿ.ಸಿ/ಕ.ರಾ.ರ.ಸಾ. ಸಂಸ್ಥೆ ಬಸ್‌ಗಳಲ್ಲಿ ಕೆಲವು ಪ್ರಯಾಣಿಕರು ಶ್ರವಣ ಸಾಧನ (ಇಯರ್ ಫೋನ್) ಹಾಕಿಕೊಳ್ಳದೆ ಮೊಬೈಲ್‌ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಧ್ವನಿ ಎತ್ತರಿಸಿ, ಮೊಬೈಲ್ ಉಪಯೋಗಿಸುತ್ತಿರುವುದರಿಂದ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ<br><br>**ಕ.ರಾ.ರ.ಸಾ.ನಿಗಮ:**<br>ನಿಗಮದ ಸುತ್ತೋಲೆ ಸಂಖ್ಯೆ 1653, ದಿನಾಂಕ: 11.11.2021 ರನ್ವಯ ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989, ನಿಯಮ 94(1)(V) ನ್ನು ಉಲ್ಲಂಘಿಸಿ ನಿಗಮದ ಬಸ್ಸುಗಳಲ್ಲಿ ಪ್ರಯಾಣಿಕರು ಮೊಬೈಲ್ ದೂರವಾಣಿ ಮೂಲಕ ಜೋರಾಗಿ ಶಬ್ದ ಹೊರಸೂಸುವಂತೆ ಹಾಡು/ ಪದ್ಯ/ ವಾರ್ತೆ/ ಸಿನಿಮಾ ಇತ್ಯಾದಿ ಹಾಕುವುದರಿಂದ ಶಬ್ದಮಾಲಿನ್ಯ ಉಂಟಾಗುವುದರಿಂದ "ನಿಗಮದ ಬಸ್ಸುಗಳಲ್ಲಿ ದೂರವಾಣಿಯ ಮೂಲಕ ಜೋರಾಗಿ ಹಾಡು/ ಪದ್ಯ/ ವಾರ್ತೆ/ ಸಿನಿಮಾ ಇತ್ಯಾದಿ ಹಾಕುವುದನ್ನು ಕಡ್ಡಾಯವಾಗಿ ನಿರ್ಬಂಧಿಸಲಾಗಿದೆ".<br><br>**ಬೆಂ.ಮ.ಸಾ.ಸಂಸ್ಥೆ:**<br>ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರು ಮೊಬೈಲ್‌ಗಳಲ್ಲಿ ಲೌಡ್‌ಸ್ಪೀಕರ್‌ಗಳಲ್ಲಿ ಹಾಡುಗಳನ್ನು ಹಾಕುವುದನ್ನು ನಿರ್ಬಂಧಿಸಿರುವ ಬಗ್ಗೆ ಸುತ್ತೋಲೆ ಸಂಖ್ಯೆ:495/2019, ದಿನಾಂಕ: 19.09.2019ನ್ನು ಹೊರಡಿಸಲಾಗಿರುತ್ತದೆ. |
| ಆ. | ಹಾಗಿದ್ದಲ್ಲಿ, ರೈಲಿನಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ವಿಧಿಸಿದ ಮಾದರಿಯಲ್ಲಿ (ಇಯರ್ ಫೋನ್) ಕಡ್ಡಾಯವಾಗಿ ಬಳಸುವಂತೆ ನಿರ್ದೇಶನ ನೀಡಲಾಗುವುದೇ; | |
| ಇ. | ಬಿ.ಎಂ.ಟಿ.ಸಿ. ಬಸ್ಸುಗಳಲ್ಲಿ ಕಾಲೇಜು ವಿದ್ಯಾರ್ಥಿನಿಯರಿಗೆ ಮೀಸಲಿಟ್ಟ ಮಹಿಳಾ ಸೀಟು ಖಾಲಿ ಇದ್ದರೂ ಪುರುಷರ | ಬೆಂ.ಮ.ಸಾ.ಸಂಸ್ಥೆಯ ಬಸ್‌ಗಳಲ್ಲಿ ಮಹಿಳೆಯರಿಗೆ, ಮಹಿಳಾ ಹಿರಿಯ ನಾಗರಿಕರಿಗೆ, ವಿಕಲಚೇತನರಿಗೆ ಮತ್ತು ಪುರುಷ ಹಿರಿಯ |

| | | |
|---|---|---|
| | ಸೀಟುಗಳಲ್ಲಿ ಕೂರುತ್ತಿರುವುದರಿಂದಾಗಿ ರೋಗಿಗಳು ಮತ್ತು ವೃದ್ಧರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಾಗರಿಕರಿಗೆ ಆಸನಗಳನ್ನು ಮೀಸಲಿರಿಸಲಾಗಿದೆ. |
| ಈ. | ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಸದರಿ ಮೀಸಲು ಆಸನಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಆಸನಗಳಲ್ಲಿ ಪುರುಷರು, ಮಹಿಳೆಯರು, ಹಿರಿಯ ನಾಗರಿಕರು, ವಿಕಲಚೇತನರು ಸೇರಿದಂತೆ ಎಲ್ಲಾ ಸಾರ್ವಜನಿಕ ಪ್ರಯಾಣಿಕರು ಕುಳಿತು ಪ್ರಯಾಣಿಸಬಹುದಾಗಿರುತ್ತದೆ.<br><br>ಸಂಸ್ಥೆಯ ಬಸ್ಸುಗಳಲ್ಲಿ ಪುರುಷರಿಗೆ ಆಸನಗಳನ್ನು ಮೀಸಲಿರಿಸಿರುವುದಿಲ್ಲ. |

ಸಂಖ್ಯೆ: ಟಿಡಿ 60 ಟಿಸಿಕ್ಯೂ 2023

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು